ಒಂದು ಹೆಜ್ಜೆ ಸ್ವಚ್ಛತೆ ಕಡೆ

ಕರ್ನಾಟಕ ಸರಕಾರ
# ಜಿಲ್ಲಾ ಪಂಚಾಯತ್ ಕೊಪ್ಪಳ

ಸಂಖ್ಯೆ: ಜಿಪಂಕೊ/ಸಿಬ್ಬಂದಿ-1/ಸಿಆರ್-(ಒ)/2016-17 ದಿನಾಂಕ: 05-03-2018.

## :: ಅಧಿಸೂಚನೆ ::

**ವಿಷಯ:** ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದ ನೇರ ನೇಮಕಾತಿ ಖೋಟಾದ ಪರಿಶಿಷ್ಟ ಜಾತಿಗೆ ಸಂಬಂಧಿತ 01 ಬ್ಯಾಕ್‌ಲಾಗ್ ಹುದ್ದೆಯನ್ನು ಭರ್ತಿ ಮಾಡುವ ಕುರಿತು.

**ಉಲ್ಲೇಖ:**1 ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/13/ಎಸ್‌ಬಿಸಿ/2001 ದಿನಾಂಕ:21-11-2001.

2 ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ/305/ಗ್ರಾಪಂಕಾ/2013 ದಿನಾಂಕ:22-08-2016 ಹಾಗೂ ಅರೇ ಸರ್ಕಾರಿ ಪತ್ರ ದಿನಾಂಕ:18-01-2017 ಮತ್ತು 03-11-2017.

3 ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ:01-01-2018.

****

ಕೊಪ್ಪಳ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದ ನೇರ ನೇಮಕಾತಿ ಖೋಟಾದಡಿ ಖಾಲಿ ಇರುವ ಬ್ಯಾಕ್‌ಲಾಗ್‌ನ 01 ಹುದ್ದೆಯನ್ನು ಭರ್ತಿ ಮಾಡಲು ಉಲ್ಲೇಖ (1)ರ ಅಧಿಸೂಚನೆಯಂತೆ ಜಿಲ್ಲಾ ಪಂಚಾಯತ್ ಹಂತದಲ್ಲಿಯೇ ನೇಮಕಾತಿ ಮಾಡಲು ಉಲ್ಲೇಖ (2)ರ ಮೂಲಕ ನಿರ್ದೇಶಿಸಲಾಗಿದೆ.

ಈ ಜಿಲ್ಲೆಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ನೌಕರಿ ಮೀಸಲಾತಿ ನಿಯಮಗಳು 2013 ಜಾರಿಯಲ್ಲಿರುವುದರಿಂದ ಗ್ರೇಡ್-2 ಕಾರ್ಯದರ್ಶಿ ನೇರ ನೇಮಕಾತಿ ಕೋಟಾದಡಿ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಒಂದು ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿ ಬ್ಯಾಕ್‌ಲಾಗ್ ಹುದ್ದೆಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/13/ಎಸ್‌ಬಿಸಿ/2001 ದಿನಾಂಕ:21-11-2001ರಲ್ಲಿಯ ನಿರ್ದೇಶನದಂತೆ ಭರ್ತಿ ಮಾಡಲು ಕ್ರಮವಹಿಸುವುದಾಗಿ ತಿಳಿಸಿ ಸರ್ಕಾರಕ್ಕೆ ಉಲ್ಲೇಖ (3)ರ ಮೂಲಕ ವರದಿ ಮಾಡಲಾಗಿದೆ.

ಮುಂದುವರೆದು 371(ಜೆ) ಅಡಿಯ ಸ್ಥಳೀಯ ವೃಂದದಲ್ಲಿ ಗ್ರೇಡ್-2 ಕಾರ್ಯದರ್ಶಿ ನೇರ ನೇಮಕಾತಿ ಕೋಟಾದ 01 ಬ್ಯಾಕ್‌ಲಾಗ್ ಹುದ್ದೆಗೆ ನೇಮಕಾತಿ ಕುರಿತು ಹೈದ್ರಾಬಾದ್-ಕರ್ನಾಟಕ ಪ್ರದೇಶ ವ್ಯಾಪ್ತಿಯ (ಜಿಲ್ಲೆಗಳಾದ ಕೊಪ್ಪಳ, ಬಳ್ಳಾರಿ, ರಾಯಚೂರು, ಬೀದರ, ಕಲಬುರಗಿ, ಯಾದಗಿರಿ) ಅರ್ಹ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಯನ್ನು ಅಹ್ವಾನಿಸಲಾಗಿದೆ. **ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಕೊಪ್ಪಳ ಜಿಲ್ಲೆಯ ವೆಬ್‌ಸೈಟ್ www.koppal.nic.in** ರಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದೃಢೀಕರಿಸಿದ ದಾಖಲೆಗಳೊಂದಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯಾಲಯ ಕೊಪ್ಪಳ ಇಲ್ಲಿಗೆ ಸಲ್ಲಿಸುವ ಕೊನೆಯ ದಿನಾಂಕ:31-03-2018 ಸಾಯಂಕಾಲ 5.30 ರೊಳಗಡೆ ತಲುಪಿಸತಕ್ಕದ್ದು.

**ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭ್ಯರ್ಥಿಗಳನ್ನು ನೇಮಕಾತಿ ಮಾಡಲು ಮೀಸಲಿರಿಸಿದ ಬ್ಯಾಕ್‌ಲಾಗ್ ಹುದ್ದೆಗಳು ಈ ಕೆಳಗಿನಂತಿವೆ.**

| ಕ್ರ.ಸಂ. | ಹುದ್ದೆ | ಮೀಸಲಾತಿ ವರ್ಗ | ಹುದ್ದೆಗಳ ಸಂಖ್ಯೆ |
|---|---|---|---|
| 1 | ಗ್ರೇಡ್-2 ಕಾರ್ಯದರ್ಶಿ | ಪ.ಜಾತಿ/ಮಹಿಳೆ | 01 |

1) **ಶೈಕ್ಷಣಿಕ ವಿದ್ಯಾರ್ಹತೆ :**

ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು (ಐ.ಟಿ.ಐ ಅಥವಾ 03 ವರ್ಷದ ಡಿಪ್ಲೋಮಾ) ಹೊಂದಿರಬೇಕು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

2) **ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:31-03-2018 ರಂದು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ಪ್ರವರ್ಗ | ಕನಿಷ್ಠ | ಗರಿಷ್ಠ |
|---|---|---|
| ಪರಿಶಿಷ್ಟ ಜಾತಿ | 18 | 40 |

3) **ಜನ್ಮ ದಿನಾಂಕ :**

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ), ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

4) **ಅರ್ಜಿ ಸಲ್ಲಿಸುವ ವಿಧಾನ :**

ನಿಗದಿತ ಅರ್ಜಿಯನ್ನು ಭರ್ತಿಮಾಡಿ ನೇರವಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಹೊಸಪೇಟ್ ರೋಡ್, ಕೊಪ್ಪಳದಲ್ಲಿ ದ್ವಿ-ಪ್ರತಿಯಲ್ಲಿ ಸಲ್ಲಿಸಲು ತಿಳಿಸಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಲು ಮಾತ್ರ ಅವಕಾಶ ಇರುತ್ತದೆ. ಅಂಚೆ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿ ಗ್ರೇಡ್-2 ಕಾರ್ಯದರ್ಶಿ ಹುದ್ದೆಗೆ ನೇಮಕಾತಿ ಎಂದು ಬರೆದಿರಬೇಕು.

5) **ಅರ್ಜಿ ಶುಲ್ಕ :**

ಪರಿಶಿಷ್ಟ ಜಾತಿ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ ಅರ್ಜಿ ಶುಲ್ಕ ಇರುವುದಿಲ್ಲ.

6) **ಜಾತಿ ಮೀಸಲಾತಿ ಪ್ರಮಾಣ ಪತ್ರ :**

ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ಸಕ್ಷಮಪ್ರಾಧಿಕಾರದಿಂದ ಈ ಅಧಿಸೂಚನೆ ದಿನಾಂಕದೊಳಗಡೆಯೇ ಪಡೆದಿರಬೇಕು.

7) **ಹೈದ್ರಾಬಾದ್-ಕರ್ನಾಟಕ (371 (ಜೆ)) ಪ್ರಮಾಣ ಪತ್ರ :**

ಕರ್ನಾಟಕ ಸಾರ್ವಜನಿಕ ಉದ್ಯೋಗ ಹೈದ್ರಾಬಾದ್ ಕರ್ನಾಟಕ ಮೀಸಲಾತಿ 2013ರನ್ವಯ ಸದರಿ ಹುದ್ದೆ ಹೈದ್ರಾಬಾದ್-ಕರ್ನಾಟಕ ಪ್ರದೇಶ ವ್ಯಾಪ್ತಿಗೆ ಸೇರಿದ್ದು, ಈ ಬಗ್ಗೆ ಸಕ್ಷಮಪ್ರಾಧಿಕಾರವು ನೀಡುವ ನಿಗದಿತ ಅರ್ಹತಾ ಪ್ರಮಾಣ ಪತ್ರವನ್ನು ದಿನಾಂಕ:31-03-2018 ದಿನಾಂಕದೊಳಗಡೆಯೇ ಪಡೆದುಕೊಂಡಿರತಕ್ಕದ್ದು.

8) **ಸೇವಾನಿರತ ಅಭ್ಯರ್ಥಿ :**

ಸೇವೆಯಲ್ಲಿ (In-Service) ಇರುವ ಅಭ್ಯರ್ಥಿಗಳು ತಮ್ಮ ಮೇಲಾಧಿಕಾರಿಗಳ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ತಲುಪುವಂತೆ ಸಲ್ಲಿಸತಕ್ಕದ್ದು.

9) **ಆಯ್ಕೆ ವಿಧಾನ :**

ನಿಗದಿತ ದಿನಾಂಕದೊಳಗಾಗಿ ಸ್ವೀಕೃತಿಯಾದ ಅರ್ಜಿಗಳನ್ನು ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ (Merit Base) ಗರಿಷ್ಠ ಅಂಕಗಳನ್ನು ಪರಿಗಣಿಸಿ ಆಯ್ಕೆ ಮಾಡಲಾಗುವುದು.

10) **ಅರ್ಹತಾ ಷರತ್ತುಗಳು :**

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.
- ಅಭ್ಯರ್ಥಿಯು ಈ ಹಿಂದೆ ಯಾವುದೇ ಸರಕಾರಿ ಸೇವೆಯಿಂದ ವಜಾಗೊಂಡಿರಬಾರದು.

11) **ವೇತನ ಶ್ರೇಣಿ:** 11600–200–12000–250–13000–300–14200–350–15600–400–17200–450–19000–500–21000 ಮತ್ತು ಇತರೆ ಭತ್ಯೆಗಳು.

12) **ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ದ್ವಿ-ಪ್ರತಿಯಲ್ಲಿ ಸಲ್ಲಿಸುವುದು.
- ಗಣಕಯಂತ್ರ ಜ್ಞಾನ ಹೊಂದಿರುವ ಬಗ್ಗೆ ಪ್ರಮಾಣ ಪತ್ರ.
- ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೋಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ
- ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
- ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ನೌಕರಿ ಸೇವೆಯಲ್ಲಿ ಇರುವ ಅಭ್ಯರ್ಥಿಗಳು ತಮ್ಮ ಇಲಾಖೆಯ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.
- ಅರ್ಜಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಕೊಪ್ಪಳದಲ್ಲಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕ ಪಂಚಾಯತಿ ಕೊಪ್ಪಳ/ಗಂಗಾವತಿ/ಕುಷ್ಟಗಿ/ ಯಲಬುರ್ಗಾಗಳಲ್ಲಿ ಲಭ್ಯವಿರುತ್ತದೆ. ಹಾಗೂ ದಿನಾಂಕ:31-03-2018ರ ಮಧ್ಯಾಹ್ನ 1-30 ರವರೆಗೆ ಮಾತ್ರ ಲಭ್ಯವಿರುತ್ತದೆ. ಅರ್ಜಿಗಳನ್ನು ನೇರವಾಗಿ **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಕೊಪ್ಪಳ** ಇಲ್ಲಿ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಲು ಅವಕಾಶ ಇರುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:31-03-2018 ಕಚೇರಿ ಸಮಯ ಸಾಯಂಕಾಲ 5.30 ಗಂಟೆ ಮುಗಿದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ. ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.
- ಮುಕ್ತ ವಿಶ್ವವಿದ್ಯಾನಿಲಯದಿಂದ ಪಡೆದ ಶೈಕ್ಷಣಿಕ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.
- ಸರ್ಕಾರಿ ನಿಯಮಗಳನುಸಾರ ವಿಧವೆಯರಿಗೆ, ಅಂಗವಿಕಲರಿಗೆ, ಸರ್ಕಾರಿ ಸೇವೆಯಲ್ಲಿರುವವರೆಗೆ ನಿಯಮಾನುಸಾರ ವಯೋಮಿತಿ ಸಡಿಲಿಕೆ ಇದೆ.
- ಹೆಚ್ಚಿನ ವಿವರಗಳಿಗಾಗಿ ಕೊಪ್ಪಳ ಜಿಲ್ಲೆಯ ವೆಬ್‌ಸೈಟ್ www.koppal.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟಿಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ:08539-221210ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

[ವೆಂಕಟ್ ರಾಜಾ] ಭಾ.ಆ.ಸೇ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಹಾಗೂ ನೇಮಕಾತಿ ಪ್ರಾಧಿಕಾರಿಗಳು,
ಜಿಲ್ಲಾ ಪಂಚಾಯತ್, ಕೊಪ್ಪಳ.

ಗೆ,
ಸಂಕಲನಾಧಿಕಾರಿ ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ. ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು 560059 ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 50 ಪ್ರತಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ ಇವರಿಗೆ ಒದಗಿಸಲು ಕೋರಿದೆ.

ಪ್ರತಿಯನ್ನು:

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಸರಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ
3) ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಕಲಬುರುಗಿ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ, ರಾಯಚೂರು, ಬೀದರ, ಕಲಬುರಗಿ ಮತ್ತು ಯಾದಗಿರಿ ಇವರಿಗೆ ಮಾಹಿತಿಗಾಗಿ ನೀಡುತ್ತಾ, ಸದರಿ ವಿಷಯ ಕುರಿತು ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5) ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ ರವರಿಗೆ ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
6) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕ ಪಂಚಾಯತ್, ಕೊಪ್ಪಳ/ಗಂಗಾವತಿ/ಕುಷ್ಟಗಿ/ ಯಲಬುರ್ಗಾ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
7) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ / ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

**ಕೊಪ್ಪಳ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್, ಕೊಪ್ಪಳದ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ 01 ಗ್ರೇಡ್-2 ಕಾರ್ಯದರ್ಶಿ (ಬ್ಯಾಕ್‌ಲಾಗ್ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿ) ಹುದ್ದೆಗೆ ಅರ್ಜಿ.**

ಇತ್ತೀಚಿನ ಭಾವ ಚಿತ್ರ ಅಂಟಿಸುವುದು (ಪಾಸ ಪೋರ್ಟ್ ಅಳತೆ)

**ಇವರಿಗೆ,**
ನೇಮಕಾತಿ ಪ್ರಾಧಿಕಾರ,
ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್,
**ಕೊಪ್ಪಳ.**

**ಮಾನ್ಯರೇ,**

ಕೊಪ್ಪಳ ಜಿಲ್ಲೆಯಲ್ಲಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದ ನೇರ ನೇಮಕಾತಿ ಖೋಟಾದ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿ ಬ್ಯಾಕ್‌ಲಾಗ್ ಹುದ್ದೆಗೆ 371(ಜೆ) ಸ್ಥಳೀಯ ಅಭ್ಯರ್ಥಿ ವೃಂದದಲ್ಲಿ ಈ ಕೆಳಗಿನ ಮಾಹಿತಿಯೊಂದಿಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 1. | ಅಭ್ಯರ್ಥಿಯ ಪೂರ್ಣ ಹೆಸರು<br>(ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ) | | | |
| 2. | ಜನ್ಮ ದಿನಾಂಕ | | | |
| 3. | ಅಭ್ಯರ್ಥಿಯ ತಂದೆ/ತಾಯಿ ಪೂರ್ಣ ಹೆಸರು | | | |
| 4. | ಪೂರ್ಣ ವಿಳಾಸ<br>ಪೋಸ್ಟ್<br>ತಾಲ್ಲೂಕಾ<br>ಜಿಲ್ಲೆ<br>ಪಿನ್ ಕೋಡ್ | | | |
| 5. | ದೂರವಾಣಿ / ಮೊಬೈಲ್ ನಂ. | | | |
| 6. | ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ<br>(ಪಿ.ಯು.ಸಿ ಅಥವಾ ಐ.ಟಿ.ಐ ಮತ್ತು 3 ವರ್ಷದ ಡಿಪ್ಲೋಮಾ) | ಗರಿಷ್ಠ ಅಂಕಗಳು | ಪಡೆದ ಒಟ್ಟು ಅಂಕಗಳು | ಶೇಕಡಾ (%) |
| | | | | |
| 7. | ವೈವಾಹಿಕ ಸ್ಥಿತಿ | ವಿವಾಹಿತ/ಅವಿವಾಹಿತ | | |
| 8. | ವಿಧವೆಯರೇ?<br>(ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಇರಬೇಕು) | | | |
| 9. | ಅಂಗವಿಕಲರೇ?<br>(ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಇರಬೇಕು) | | | |
| 10. | ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣ ಪತ್ರ | ಅ. ಜಾತಿ<br>ಆ. ಉಪ ಜಾತಿ | | |
| 11. | ಹೈದ್ರಾಬಾದ್ ಕರ್ನಾಟಕ ವ್ಯಾಪ್ತಿಯ (371 ಜೆ) ಸಂಬಂಧಿತ ಪ್ರಮಾಣ ಪತ್ರ<br>(ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಇರಬೇಕು) | | | |
| 12. | ಸರ್ಕಾರಿ ಸೇವೆಯಲ್ಲಿರುವ ಖಾಯಂ ಅಭ್ಯರ್ಥಿಗಳೇ?<br>ಹೌದಾದಲ್ಲಿ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ ನಿರಾಪೇಕ್ಷಣಾ ಪ್ರಮಾಣ ಪತ್ರ ಸಲ್ಲಿಸುವುದು. | | | |

| | | |
|---|---|---|
| 13. | **ಇಬ್ಬರು ಸ್ಥಳೀಯ ಗಣ್ಯ ವ್ಯಕ್ತಿಗಳು ನಿಮ್ಮ ನಡತೆ ಮತ್ತು ಪೂರ್ವೋತ್ತರಗಳ ಬಗ್ಗೆ ನೀಡಿದ 6 ತಿಂಗಳಿಗೂ ಕಡಿಮೆ ಇಲ್ಲದ ಪ್ರಮಾಣ ಪತ್ರದ ಪ್ರತಿ ಸಲ್ಲಿಸುವುದು.** | |
| 14. | **ಗಣಕಯಂತ್ರ ಶಿಕ್ಷಣದ ಬಗ್ಗೆ ಪ್ರಮಾಣ ಪತ್ರ** | |
| 15. | **ಅರ್ಜಿ ಲಗತ್ತಿಸಿದ ದಾಖಲೆಗಳ ಪಟ್ಟಿ.**<br>1.<br>2.<br>3.<br>4.<br>5.<br>6.<br>7.<br>8.<br>9.<br>10 | |

**ಘೋಷಣಾ ಪತ್ರ**

ಕುಮಾರಿ / ಶ್ರೀಮತಿ ---------------------------------------- ಆದ ನಾನು ಅರ್ಜಿ ಸಲ್ಲಿಸಿರುವ ಹುದ್ದೆಗೆ ಜಾಹೀರಾತಿನಲ್ಲಿ ನಿಗದಿಪಡಿರುವ ಎಲ್ಲಾ ಅರ್ಹತೆಯನ್ನು ಹೊಂದಿರುತ್ತೇನೆ. ಅರ್ಜಿಯನ್ನು ಸರಿಯಾಗಿ ಭರ್ತಿ ಮಾಡದಿದ್ದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸಬಹುದು. ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ವಿವರಗಳು ಸತ್ಯವಾಗಿದ್ದು, ಪರಿಪೂರ್ಣವಾಗಿವೆ. ವಿವರಗಳು ಸುಳ್ಳಾಗಿ ಕಂಡು ಬಂದ ಪಕ್ಷದಲ್ಲಿ ನನ್ನನ್ನು ಯಾವಾಗಲಾದರೂ ಸೇವೆಯಿಂದ ಯಾವ ಮುನ್ಸೂಚನೆಯಿಲ್ಲದೆ ವಜಾ ಮಾಡುವುದರೊಂದಿಗೆ ಕ್ರಿಮಿನಲ್ ಮೊಕದ್ದಮೆಗೆ ಕ್ರಮ ಕೈಗೊಳ್ಳಲು ಇಲಾಖೆಗೆ ಅಧಿಕಾರವಿದೆಯೆಂದು ತಿಳಿದಿದ್ದೇನೆ ಹಾಗೂ ನಾನು ಈವರೆಗೆ ಯಾವುದೇ ಕಾನೂನು ಬಾಹಿರ ಬಹುಪತಿ ಹೊಂದಿರುವುದಿಲ್ಲ, ಸರ್ಕಾರಿ / ಸರ್ಕಾರಿ ಸ್ವಾಮ್ಯದ ಇಲಾಖೆಗಳ ಸೇವೆಯಿಂದ ವಜಾಗೊಂಡಿರುವುದಿಲ್ಲ ಹಾಗೂ ಕ್ರಿಮಿನಲ್ ಮೊಕದ್ದಮೆಗಳನ್ವಯ ವಿಚಾರಣೆ/ಶಿಕ್ಷೆಗೆ ಒಳಪಟ್ಟಿಲ್ಲವೆಂದು ಪ್ರಮಾಣೀಕರಿಸುತ್ತೇನೆ.

**ಅಭ್ಯರ್ಥಿಯ ಸಹಿ**

**ದಿನಾಂಕ** : --------------

**ಸ್ಥಳ** : --------------------

**ಸೂಚನೆಗಳು :-**

1. ಅರ್ಜಿಯಲ್ಲಿ ಕೇಳಿರುವ ವಿವರಗಳನ್ನು ಅಭ್ಯರ್ಥಿಯು ಸ್ವಂತ ಕೈ ಬರಹದಲ್ಲಿ ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು.
2. ಅಭ್ಯರ್ಥಿಯು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ನಿಯಮಗಳಿಗೆ ಬದ್ಧನಾಗಿರತಕ್ಕದ್ದು.
3. ಚಾಲ್ತಿಯಲ್ಲಿರುವ ಸರ್ಕಾರದ ಆದೇಶದಂತೆ ಸಂಬಂಧಪಟ್ಟ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರಬೇಕು ಅವಧಿ ಮೀರಿದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.